ಸಾಕ್ಷಿಗೆ ಕ್ರಮಬದ್ಧವಾಗಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆ ವಾದಿ ಪರ ವಕೀಲರಿಂದಃ-

ಬಿ. ರಮೇಶ್ ರವರು ಮರಣ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಡಿ-8 ಎಂದು, ದಿನಾಂಕ 07.01.2014 ರಂದು ವಾದಿಪರ ವಕೀಲರಿಗೆ ನೀಡಿದ ಪ್ರತ್ಯುತ್ತರ ನೋಟಿಸ್ ನ ಕಛೇರಿ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಡಿ-9 ಎಂದು, ನೋಟಿಸು ಕಳುಹಿಸಿದ ಬಗ್ಗೆ ಅಂಚೆ ರಶೀದಿಯನ್ನು ಹಾಜರುಪಡಿಸಿದ್ದು ಅದನ್ನು ನಿಡಿ-10 ಎಂದು, ರಾಮನಗರ ಗ್ರಾಮಾಂತರ ಪೊಲೀಸರ್ ಠಾಣಾ ಮೊಕದ್ದಮ ಸಂಖ್ಯೆ 231/2013 ರ ಪ್ರಥಮ ವರ್ತಮಾನ ವರದಿಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಡಿ-11 ಎಂದು, ದಿನಾಂಕ 06.03.2003 ರಂದು ಆದ ವ್ಯವಸ್ಥಾ ಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಡಿ-12 ಎಂದು, ದಾವಾ ಆಸ್ತಿಯ 3 ಫೋಟೋಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿಡಿ-13 ಎಂದು, ಅದಕ್ಕೆ ಸಂಬಂಧಿಸಿದಂತೆ ಪಾವತಿ ಮಾಡಿರುವ ರಶೀದಿಯನ್ನು ಹಾಜರುಪಡಿಸಿದ್ದು ಅದನ್ನುನಿಡಿ-13(ಎ) ಎಂದು, 3 ಫೋಟೋಗಳಿಗೆ ಸಂಬಂಧಿಸಿದಂತೆ 3 ಸಿಡಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿಡಿ-13(ಬಿ) ಎಂದು, ರಾಮನಗರ ಗ್ರಾಮಾಂತರ ಪೊಲೀಸರ್ ಠಾಣಾ ಮೊಕದ್ದಮ ಸಂಖ್ಯೆ 194/2023 ರ ಪ್ರಥಮ ವರ್ತಮಾನ ವರದಿ, ದೂರಿನ ಆದೇಶ ಪುಟದ ದೃಢೀಕೃತ ನಕಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿಡಿ-14 ಎಂದು, ಗುರುತಿಸಲಾಯಿತು. ಓ.ಎಸ್. 169/2014 ರ ದಾವೆಯ ಆದೇಶ ಪುಟದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಡಿ-15 ಎಂದು ಗುರುತಿಸಲಾಯಿತು.

ಪಾಟೀ ಸವಾಲು ವಾದಿ ಪರ ವಕೀಲರಿಂದಃ-

ಹಾಜರಿದ್ದು ಸಮಯ ಕೋರಿದ ಕಾರಣ ಮುಂದೂಡಲಾಯಿತು.

(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ಬಹಿರಂಗ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಗಣಕೀಕರಿಸಿದೆ)

(ಸಾಕ್ಷಿಗೆ ಸಾಕ್ಷ್ಯವನ್ನು ಓದಿ ಹೇಳಲಾಗಿ ಕೇಳಿ ಸರಿ ಇದೆ ಎಂದು ಒಪ್ಪಿದ್ದಾರೆ)

(ಮಹೇಶ್ ಬಿ.ಟಿ)
1 ನೇ ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು,
ರಾಮನಗರ.